ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ: 23ನೇ ಜುಲೈ, 2019

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಗಣಕ ಯಂತ್ರಗಳ ಶಿಕ್ಷಕರಿಲ್ಲದ ಬಗ್ಗೆ

ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

92 (520) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಗಣಕಯಂತ್ರ ಶಿಕ್ಷಕರಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಗಣಕಯಂತ್ರ ತರಬೇತಿಯನ್ನು ನೀಡಲು ಯಾವ ಏಜೆನ್ಸಿಯವರಿಗೆ ವಹಿಸಲಾಗಿದೆ ; ಇವರಿಗೆ ವಿಧಿಸಿರುವ ನಿಯಮಗಳಾವುವು ;

(ಇ) ಈ ಏಜೆನ್ಸಿಯವರು ಸಮರ್ಪಕವಾಗಿ ಕಾರ್ಯನಿರ್ವಹಿಸದೇ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಇವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)